ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2016-17 ದಿನಾಂಕ: 16-02-2017

## ಪತ್ರಿಕಾ ಆಮಂತ್ರಣ

1. ಕೆರೆ ಒತ್ತುವರಿ ಸದನ ಸಮಿತಿಯ ಉಪ ಸಮಿತಿಯು ಅಗರ ಕೆರೆ ಮತ್ತು ಪಂಪ್‌ಹೌಸ್ ಹಾಗೂ ಅದ್ವೈತ್ ವೆಂಚರ್ಸ್ ಪ್ರೈವೇಟ್ ಲಿಮಿಟೆಡ್‌ಗೆ ಭೇಟಿ.

   ದಿನಾಂಕ: **17-02-2017** ಶುಕ್ರವಾರ, ಬೆಳಿಗ್ಗೆ **8.30** ಗಂಟೆಗೆ
   ಸ್ಥಳ: ಶಾಸಕರ ಭವನ-2ರ ಸಮ್ಮೇಳನ ಸಭಾಂಗಣದಲ್ಲಿ ಸಭೆ

   ಪರಿವೀಕ್ಷಣೆ ಸ್ಥಳ: (ಸಭೆ ನಂತರ)

   ಬೆಂಗಳೂರಿನ ಹೆಚ್.ಎಸ್.ಆರ್. ಲೇಔಟ್‌ನಲ್ಲಿರುವ ಜಕ್ಕಸಂದ್ರದ ಅಗರ ಕೆರೆ ಮತ್ತು ಪಂಪ್‌ಹೌಸ್ ಹಾಗೂ ಅದ್ವೈತ್ ವೆಂಚರ್ಸ್ ಪ್ರೈವೇಟ್ ಲಿಮಿಟೆಡ್ ನಿರ್ಮಿಸುತ್ತಿರುವ ಅಪಾರ್ಟ್‌ಮೆಂಟ್‌ಗೂ ಹಾಗೂ ರಾಜಕಾಲುವೆಗೂ ಇರುವ ನಡುವಿನ ಅಂತರ ಕುರಿತಂತೆ ಸ್ಥಳ ಪರಿಶೀಲನೆ.

## ಪತ್ರಿಕಾ ಪ್ರಕಟಣೆ

# ಏರೋಸ್ಪೇಸ್ ಮತ್ತು ರಕ್ಷಣಾ ಕ್ಷೇತ್ರದ ಸೆಂಟರ್‌ಆಫ್ ಎಕ್ಸಲೆನ್ಸ್ ಸ್ಥಾಪನೆ ಒಪ್ಪಂದಕ್ಕೆ ಸಹಿ

ಬೆಂಗಳೂರು, ಫೆಬ್ರವರಿ 16, (ಕರ್ನಾಟಕ ವಾರ್ತೆ)

ಚಿಕ್ಕಬಳ್ಳಾಪುರ ಜಿಲ್ಲೆಯ ಮುದ್ದೇನಹಳ್ಳಿಯಲ್ಲಿರುವ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾನಿಲಯ ಕ್ಯಾಂಪಸ್‌ನಲ್ಲಿ ಹಾಗೂ ಬೆಂಗಳೂರು ನಗರದಲ್ಲಿ ಕರ್ನಾಟಕ ಸರ್ಕಾರ ಹಾಗೂ ಫ್ರಾನ್ಸ್‌ನ ದಸ್ಸಾಲ್ಟ್ ಸಿಸ್ಟಮಿಸ್ ಸಂಸ್ಥೆಯ ಸಹಭಾಗಿತ್ವದಲ್ಲಿ ಏರೋಸ್ಪೇಸ್ ಮತ್ತು ರಕ್ಷಣಾ ಕ್ಷೇತ್ರದ ಸೆಂಟರ್ ಆಫ್ ಎಕ್ಸಲೆನ್ಸ್ ಸ್ಥಾಪಿಸುವ ಬಗ್ಗೆ ಇಂದು ಒಪ್ಪಂದ ಮಾಡಿಕೊಳ್ಳಲಾಯಿತು.

ಈ ಯೋಜನೆಯು 288.68 ಕೋಟಿ ರೂ. ವೆಚ್ಚದಲ್ಲಿ ಜಾರಿಗೊಳ್ಳಲ್ಲಿದ್ದು ಇದರಲ್ಲಿ ಫ್ರಾನ್ಸ್‌ನ ದಸ್ಸಾಲ್ಟ್ ಸಿಸ್ಟಮಿಸ್ ಅವರ ಪಾಲು 250.93 ಕೋಟಿ ರೂ.ಗಳಾಗಿದ್ದು ರಾಜ್ಯ ಸರ್ಕಾರದ ಪಾಲು 33.46 ಕೋಟಿ ರೂ.ಗಳಷ್ಟಿದೆ.

ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ಸಚಿವ ಪ್ರಿಯಾಂಕ್ ಖರ್ಗೆ ಅವರು ಈ ಸಂದರ್ಭದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ ಮಾಹಿತಿ ತಂತ್ರಜ್ಞಾನ ಕ್ಷೇತ್ರದಲ್ಲಿ ಮುಂಚೂಣಿಯಲ್ಲಿರುವ ರಾಜ್ಯಕ್ಕೆ ಈ ಸೆಂಟರ್ ಆಫ್ ಎಕ್ಸಲೆನ್ಸ್ ಸ್ಥಾಪನೆಯಿಂದ ಆನೆ ಬಲ ಬಂದಂತಾಗಿದೆ ಎಂದು ಅಭಿಪ್ರಾಯಪಟ್ಟರು. ಈ ಯೋಜನೆ ಕುರಿತು ಮಾಹಿತಿ ನೀಡಿದ ಸಚಿವರು ಈ ಸೆಂಟರ್ ಆಫ್ ಎಕ್ಸಲೆನ್ಸ್‌ನಲ್ಲಿ ವರ್ಷಕ್ಕೆ ಸುಮಾರು 1600 ಎಂಜಿನಿಯರ್‌ಗಳಿಗೆ ಉನ್ನತ ಮಟ್ಟದ ತರಬೇತಿ ಹಾಗೂ ಕೌಶಲ್ಯಾಭಿವೃದ್ಧಿ ತರಬೇತಿ ನೀಡಲು ಉದ್ದೇಶಿಸಲಾಗಿದೆ. ಜಗತ್ತಿನಲ್ಲಿಯೇ ಏರೋಸ್ಪೇಸ್ ಹಾಗೂ ರಕ್ಷಣಾ ಕ್ಷೇತ್ರಗಳಲ್ಲಿ ಮಾರುಕಟ್ಟೆ ಬೇಡಿಕೆ ಹೆಚ್ಚಾಗಿದ್ದು ಈ ಸಂಸ್ಥೆಯಿಂದಾಗಿ ಹೆಚ್ಚಿನ ಉದ್ಯೋಗಾವಕಾಶ ಲಭಿಸಲಿದೆ ಎಂದು ಆಶಾಭಾವನೆ ವ್ಯಕ್ತಪಡಿಸಿದರು.

ರಾಜ್ಯ ಸರ್ಕಾರವು ವೃತ್ತಿಪರರಿಗೆ ತರಬೇತಿ ವಿನ್ಯಾಸಗೊಳಿಸಿ ಅನುಷ್ಠಾನಗೊಳಿಸುತ್ತಿರುವ ಫ್ರಾನ್ಸ್‌ದೇಶದ ತುಲೂಸ್ ನಗರದ ಇಸ್ರೋ ಮಾದರಿಯ ಇನ್ಸ್‌ಟಿಟ್ಯೂಟ್ ಏರೋನಾಟಿಕ್ ಎಟ್ ಸ್ಪೇಷಿಯಲ್ (ಐಎಎಸ್) ನೊಂದಿಗೆ ಸಹಾ ರಾಜ್ಯ ಸರ್ಕಾರವು ಒಪ್ಪಂದ ಮಾಡಿಕೊಂಡಿದೆ. ಆ ಮೂಲಕ ಸೆಂಟರ್ ಆಫ್ ಎಕ್ಸಲೆನ್ಸ್‌ನಲ್ಲಿ ಗುಣಮಟ್ಟದ ತರಬೇತಿ ನೀಡಲಾಗುವುದು ಎಂದು ಸಚಿವರು ತಿಳಿಸಿದರು. ಈ ಸೆಂಟರ್ ಆಫ್ ಎಕ್ಸ್‌ಲೆನ್ಸ್‌ನಲ್ಲಿ ಬೇಸಿಕ್ ಮತ್ತು ಅಡ್ವಾನ್ಸ್ ಎಂಬ ಎರಡು ವಿಭಾಗದಲ್ಲಿ ತರಬೇತಿ ನೀಡಲಾಗುವುದು. ಬೇಸಿಕ್ ತರಬೇತಿಯನ್ನು ಆನ್‌ಲೈನ್‌ನಲ್ಲಿಯೂ ತರಬೇತಿ ಪಡೆಯಲು ಅವಕಾಶವಿದೆ ಎಂದು ಸಚಿವರು ತಿಳಿಸಿದರು. ಒಪ್ಪಂದದ ಪ್ರಕಾರ ತರಬೇತಿ ಪಡೆದವರಿಗೆ ಇದೇ ಕ್ಷೇತ್ರದಲ್ಲಿ ಉದ್ಯೋಗಾವಕಾಶ ಕಲ್ಪಿಸುವುದು ಸಂಸ್ಥೆಯ ಜವಾಬ್ದಾರಿಯಾಗಿದೆ ಎಂದು ಅವರು ತಿಳಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ದಸ್ಸಾಲ್ಟ್ ಸಿಸ್ಟಮಿಸ್ ಇಂಡಿಯಾದ ವ್ಯವಸ್ಥಾಪಕ ನಿರ್ದೇಶಕ ಸ್ಯಾಮ್ಸಂಗ್ ಖಾವ್ ಅವರು ಮಾತನಾಡಿ ತಮ್ಮ ಸಂಸ್ಥೆಯು ಕಳೆದ 35 ವರ್ಷಗಳಿಂದ ಏರೋಸ್ಪೇಸ್ ಮತ್ತು ರಕ್ಷಣಾ ಕ್ಷೇತ್ರದಲ್ಲಿ ಪರಿಣಿತಿಯನ್ನು ಹೊಂದಿದ್ದು ಕರ್ನಾಟಕ ಸರ್ಕಾರದೊಂದಿಗಿನ ಈ ಯೋಜನೆಯು ಉದ್ಯೋಗಾವಕಾಶ ಸೃಷ್ಟಿ ಹಾಗೂ ಕೌಶಲ್ಯಾಭಿವೃದ್ಧಿಗೆ ಮಹತ್ತರ ಕೊಡುಗೆ ನೀಡಲಿದೆ ಎಂದು ತಿಳಿಸಿದರು.

ತುಲೋಸ್ ಸಂಸ್ಥೆಯ ಐಎಎಸ್‌ನ ವ್ಯವಸ್ಥಾಪಕ ನಿರ್ದೇಶಕ ಪಿಯರಿ ವ್ಯಾಲೆಂತಿ ಅವರು ಮಾತನಾಡಿ ನಮ್ಮ ಸಂಸ್ಥೆಯು ಭಾರತದ ಡಿಆರ್‌ಡಿಒ, ಹೆಚ್‌ಎಎಲ್, ಇಸ್ರೋದಂತಹ ಸಂಸ್ಥೆಗಳ 200 ಕ್ಕೂ ಮಂದಿಗೆ ತರಬೇತಿ ನೀಡಿದ ಅನುಭವವಿದೆ. ಫ್ರೆಂಚ್ ಏರೋಸ್ಪೇಸ್ ಉದ್ಯಮ ಸಂಘದೊಂದಿಗೆ ಸಹಭಾಗಿತ್ವ ಹೊಂದಿದೆ. ನಮ್ಮ ಅನುಭವವು ಈ ಸೆಂಟರ್ ಆಫ್ ಎಕ್ಸಲೆನ್ಸ್‌ನ್ನು ಜಾಗತಿಕ ಗುಣಮಟ್ಟದ ಸಂಸ್ಥೆಯಾಗಿ ಅಭಿವೃದ್ಧಿ ಪಡಿಸಲು ನೆರವಾಗಲಿದೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಕೆ ಬಿಟ್ಸ್ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕರಾದ ಡಾ: ಎನ್. ಮಂಜುಳಾ ಹಾಗೂ ದಸಾಲ್ಟ್ ಸಿಸ್ಟಮೀಸ್‌ನ ವ್ಯವಸ್ಥಾಪಕ ನಿರ್ದೇಶಕ ಸ್ಯಾಮ್ಸಂಗ್ ಖಾವ್ ಅವರು ಒಪ್ಪಂದಕ್ಕೆ ಸಹಿ ಮಾಡಿದರು.

ಮಾಹಿತಿ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿ ಡಾ: ವಿ. ಮಂಜುಳಾ ಅವರು ಉಪಸ್ಥಿತರಿದ್ದರು.

## ಮನೆಯಂಗಳದಲ್ಲಿ ಮಾತುಕತೆ : ತಿಂಗಳ ಅತಿಥಿಯಾಗಿ ಹಿರಿಯ ಚಿತ್ರ ಕಲಾವಿದ ಪ. ಸ. ಕುಮಾರ್

ಬೆಂಗಳೂರು, ಫೆಬ್ರವರಿ 16, (ಕರ್ನಾಟಕ ವಾರ್ತೆ)

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇಲಾಖೆ ವತಿಯಿಂದ ಫೆಬ್ರವರಿ 18 ರ ಶನಿವಾರ ಸಂಜೆ 4.00 ಗಂಟೆಗೆ ನಗರದ ಜೆ. ಸಿ. ರಸ್ತೆಯಲ್ಲಿರುವ ಕನ್ನಡ ಭವನದ ನಯನ ಸಭಾಂಗಣದಲ್ಲಿ ಹಮ್ಮಿಕೊಂಡಿರುವ "ಮನೆಯಂಗಳದಲ್ಲಿ ಮಾತುಕತೆ" ಕಾರ್ಯಕ್ರಮದಲ್ಲಿ ತಿಂಗಳ ಅತಿಥಿಯಾಗಿ ಹಿರಿಯ ಚಿತ್ರ ಕಲಾವಿದ ಪ. ಸಂಪತ್ ಕುಮಾರ್ ಅವರು ಪಾಲ್ಗೊಳ್ಳಲಿದ್ದಾರೆ.

ಅಂದು ಮಧ್ಯಾಹ್ನ 3.00 ಗಂಟೆಗೆ ಸುಗಮ ಸಂಗೀತ ಕಾರ್ಯಕ್ರಮವನ್ನು ಸಹ ಹಮ್ಮಿಕೊಂಡಿದೆ.

ಎಂಆರ್ಎಂ/ಜಿಪಿಆರ್.

## ಫೆಬ್ರವರಿ 19 ರಂದು ಛತ್ರಪತಿ ಶಿವಾಜಿ ಮಹಾರಾಜರ ಜಯಂತಿ

ಬೆಂಗಳೂರು, ಫೆಬ್ರವರಿ 16, (ಕರ್ನಾಟಕ ವಾರ್ತೆ)

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇಲಾಖೆ ವತಿಯಿಂದ ಫೆಬ್ರವರಿ 19 ರಂದು ಭಾನುವಾರ ಬೆಳಿಗ್ಗೆ 11.00 ಗಂಟೆಗೆ ನಗರದ ಜೆ.ಸಿ. ರಸ್ತೆಯಲ್ಲಿನ ರವೀಂದ್ರ ಕಲಾಕ್ಷೇತ್ರದಲ್ಲಿ "ಛತ್ರಪತಿ ಶಿವಾಜಿ ಮಹಾರಾಜರ ಜಯಂತಿ" ಯನ್ನು ಹಮ್ಮಿಕೊಂಡಿದೆ.

ಈ ಕಾರ್ಯಕ್ರಮವನ್ನು ಕನ್ನಡ ಮತ್ತು ಸಂಸ್ಕೃತಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ, ಹಿರಿಯ ನಾಗರಿಕರ ಸಬಲೀಕರಣ ಸಚಿವರಾದ ಶ್ರೀಮತಿ ಉಮಾಶ್ರೀ ಅವರು ಉದ್ಘಾಟಿಸಲಿದ್ದಾರೆ.

ಕೇಂದ್ರ ರಾಸಾಯನಿಕ ಮತ್ತು ರಸಗೊಬ್ಬರ ಹಾಗೂ ಸಂಸದೀಯ ವ್ಯವಹಾರಗಳ ಖಾತೆ ಸಚಿವ ಅನಂತಕುಮಾರ್, ಬೆಂಗಳೂರು ಅಭಿವೃದ್ಧಿ ಮತ್ತು ಯೋಜನಾ ಹಾಗೂ ಬೆಂಗಳೂರು ಜಿಲ್ಲಾ ಉಸ್ತುವಾರಿ ಸಚಿವ ಕೆ.ಜೆ. ಜಾರ್ಜ್, ಕಾರ್ಮಿಕ ಸಚಿವ ಸಂತೋಷ್ ಎಸ್. ಲಾಡ್, ಬೃಹತ್ ಬೆಂಗಳೂರು ಮಹಾನಗರಪಾಲಿಕೆಯ ಮಹಾಪೌರರಾದ ಶ್ರೀಮತಿ ಜಿ. ಪದ್ಮಾವತಿ, ಪುತ್ತೂರು ವಿಧಾನಸಭಾ ಕ್ಷೇತ್ರದ ಶಾಸಕಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ

ಸಂಸದೀಯ ಕಾರ್ಯದರ್ಶಿ ಶ್ರೀಮತಿ ಶಕುಂತಲಾ ಟಿ. ಶೆಟ್ಟಿ ಅವರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ.

ಕರ್ನಾಟಕ ಕೊಳಚೆ ನಿರ್ಮೂಲನಾ ಮಂಡಳಿಯ ಆಧ್ಯಕ್ಷರು ಹಾಗೂ ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರದ ಶಾಸಕ ಆರ್. ವಿ. ದೇವರಾಜ್ ಅವರು ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಲಿದ್ದಾರೆ.

ಎಂಆರ್‌ಎಂ/.ಜಿಪಿಆರ್.

## ಫೆಬ್ರವರಿ 20 ರಂದು

## ಕವಿ ಸರ್ವಜ್ಞ ಜಯಂತಿ

ಬೆಂಗಳೂರು, ಫೆಬ್ರವರಿ 16, (ಕರ್ನಾಟಕ ವಾರ್ತೆ)

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇಲಾಖೆ ವತಿಯಿಂದ ಫೆಬ್ರವರಿ 20 ರಂದು ಸೋಮವಾರ ಬೆಳಿಗ್ಗೆ 11.00 ಗಂಟೆಗೆ ನಗರದ ಜೆ.ಸಿ. ರಸ್ತೆಯಲ್ಲಿರುವ ಕನ್ನಡ ಭವನದ ನಯನ ಸಭಾಂಗಣದಲ್ಲಿ ''ಕವಿ ಸರ್ವಜ್ಞ ಜಯಂತಿ'' ಯನ್ನು ಹಮ್ಮಿಕೊಂಡಿದೆ.

ಈ ಕಾರ್ಯಕ್ರಮವನ್ನು ಕನ್ನಡ ಮತ್ತು ಸಂಸ್ಕೃತಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ, ಹಿರಿಯ ನಾಗರಿಕರ ಸಬಲೀಕರಣ ಸಚಿವರಾದ ಶ್ರೀಮತಿ ಉಮಾಶ್ರೀ ಅವರು ಉದ್ಘಾಟಿಸಲಿದ್ದಾರೆ.

ಕೇಂದ್ರ ರಾಸಾಯನಿಕ ಮತ್ತು ರಸಗೊಬ್ಬರ ಹಾಗೂ ಸಂಸದೀಯ ವ್ಯವಹಾರಗಳ ಖಾತೆ ಸಚಿವ ಅನಂತಕುಮಾರ್, ಬೆಂಗಳೂರು ಅಭಿವೃದ್ಧಿ ಮತ್ತು ಯೋಜನಾ ಹಾಗೂ ಬೆಂಗಳೂರು ಜಿಲ್ಲಾ ಉಸ್ತುವಾರಿ ಸಚಿವ ಕೆ.ಜೆ. ಜಾರ್ಜ್, ಬೃಹತ್ ಬೆಂಗಳೂರು ಮಹಾನಗರಪಾಲಿಕೆಯ ಮಹಾಪೌರರಾದ ಶ್ರೀಮತಿ ಜಿ. ಪದ್ಮಾವತಿ, ಪುತ್ತೂರು ವಿಧಾನಸಭಾ ಕ್ಷೇತ್ರದ ಶಾಸಕಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಂಸದೀಯ ಕಾರ್ಯದರ್ಶಿ ಶ್ರೀಮತಿ ಶಕುಂತಲಾ ಟಿ. ಶೆಟ್ಟಿ ಅವರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ.

ಕರ್ನಾಟಕ ಕೊಳಚೆ ನಿರ್ಮೂಲನಾ ಮಂಡಳಿಯ ಆಧ್ಯಕ್ಷರು ಹಾಗೂ ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರದ ಶಾಸಕ ಆರ್. ವಿ. ದೇವರಾಜ್ ಅವರು ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಲಿದ್ದಾರೆ.

ಎಂಆರ್‌ಎಂ/ಜಿಪಿಆರ್.

# ಕೆ.ಪಿ.ಎಸ್.ಸಿ. –ದಾಖಲೆಗಳ ಪರಿಶೀಲನೆ

ಬೆಂಗಳೂರು, ಫೆಬ್ರವರಿ 16, (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆಯಲ್ಲಿ ಮ್ಯೂಜಿಕ್ ಟೀಚರ್ ಗ್ರೇಡ್ – 3 ಹುದ್ದೆಯ ಮೂಲ ದಾಖಲೆಗಳ ಪರಿಶೀಲನೆಗೆ ಅರ್ಹರಾದ ಅಭ್ಯರ್ಥಿಗಳ ಪಟ್ಟಿಯನ್ನು ಪ್ರಕಟಿಸಿದ್ದು, ಸದರಿ ಅಭ್ಯರ್ಥಿಗಳು ಮೂಲ ದಾಖಲೆಗಳ ಪರಿಶೀಲನೆಗೆ ಗೈರು ಹಾಜರಾಗಿರುವ ಕಾರಣ ಜೇಷ್ಠತೆಯಲ್ಲಿ ಇವರ ನಂತರ ಬರುವ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ಫೆಬ್ರವರಿ 14 ರಂದು ಆಯೋಗದ ಅಂತರ್ಜಾಲದಲ್ಲಿ ಪ್ರಕಟಿಸಲಾಗಿದೆ.

ಮೂಲ ದಾಖಲಾತಿಗಳ ಪರಿಶೀಲನೆಗೆ ಅರ್ಹರಾದ ಅಭ್ಯರ್ಥಿಗಳಿಗೆ ಪರಿಶೀಲನೆಗೆ ಹಾಜರಾಗಲು ನಿಗದಿಪಡಿಸಿದ ದಿನಾಂಕ, ವೇಳೆ ಇತ್ಯಾದಿ ಮಾಹಿತಿಗಳನ್ನು ಆಯೋಗದ ವೆಬ್‌ಸೈಟ್ **http://kpsc.kar.nic.in-Elegiblity list** ರಲ್ಲಿ ಪ್ರಕಟಿಸಲಾಗಿದೆ ಎಂದು ಕರ್ನಾಟಕ ಲೋಕಸೇವಾ ಆಯೋಗದ ಪ್ರಕಟಣೆ ತಿಳಿಸಿದೆ.

ಎಂಆರ್‌ಎಂ/ಜಿಪಿಆರ್.

# ಸಮಗ್ರ ಮಕ್ಕಳ ರಕ್ಷಣಾ ಯೋಜನೆ

ಬೆಂಗಳೂರು, ಫೆಬ್ರವರಿ 16, (ಕರ್ನಾಟಕ ವಾರ್ತೆ)

ಕೇಂದ್ರ ಸರ್ಕಾರವು ಹಾಲಿ ಇರುವ ವಿವಿಧ ಯೋಜನೆಗಳಾದ ಬಾಲನ್ಯಾಯ ಕಾಯ್ದೆಯ ಅನುಷ್ಠಾನ, ನಗರ ಮತ್ತು ಅರೆ ನಗರ ಪ್ರದೇಶಗಳಲ್ಲಿ ತೆರೆದ ತಂಗುದಾಣಗಳು, ದತ್ತು ಕಾರ್ಯಕ್ರಮ ಮತ್ತು ಮಕ್ಕಳ ಸಹಾಯವಾಣಿ ಸೇವೆಗಳ ಕಾರ್ಯಕ್ರಮಗಳನ್ನು ಒಟ್ಟುಗೂಡಿಸಿ ನೂತನವಾದ ಕೇಂದ್ರ ಪುರಸ್ಕೃತ ಸಮಗ್ರ ಮಕ್ಕಳ ರಕ್ಷಣಾ ಯೋಜನೆಯನ್ನು 2009–10ರಿಂದ ಜಾರಿಗೆ ತಂದಿದ್ದು, ಕರ್ನಾಟಕ ರಾಜ್ಯದಲ್ಲೂ ಸಹ ಈ ಯೋಜನೆಯನ್ನು ಜಾರಿಗೆ ತರಲಾಗಿದೆ ಎಂದು ಸಮಗ್ರ ಮಕ್ಕಳ ರಕ್ಷಣಾ ಸೊಸೈಟಿ ಸದಸ್ಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಮಧ್ಯೆ ಸದರಿ **ICPS** ಯೋಜನೆಯ ಅನುಷ್ಠಾನದ ಬಗ್ಗೆ **MOU** ಸಹಿಯಾಗಿರುತ್ತದೆ.ಸಮಗ್ರ ಮಕ್ಕಳ ರಕ್ಷಣಾ ಯೋಜನೆಯಡಿ ಈ ಕೆಳಗಿನ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ ಎಂದು ಅವರು ತಿಳಿಸಿದ್ದಾರೆ.

**ಸೊಸೈಟಿಯು ಈ ಕೆಳಕಂಡ ಸಾಮಾಜಿಕ ಕಾಯಿದೆಗಳನ್ವಯ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುತ್ತಿದೆ.**

1. **ಬಾಲ ನ್ಯಾಯ (ಮಕ್ಕಳ ಪಾಲನೆ ಹಾಗೂ ರಕ್ಷಣೆ)ಕಾಯ್ದೆ, 2015.**
2. **ಬಾಲ ನ್ಯಾಯ (ಮಕ್ಕಳ ಪಾಲನೆ ಹಾಗೂ ರಕ್ಷಣೆ) ಕರ್ನಾಟಕ ನಿಯಮಗಳು 2016.**
3. **ಹಿಂದೂ ದತ್ತಕ ಮತ್ತು ನಿರ್ವಹಣೆ ಕಾಯ್ದೆ 1956**
4. ಪೋಷಕತ್ವ ಮತ್ತು ವಾರ್ಡ್ಸ್ ಕಾಯ್ದೆ, 1860
5. ಲೈಂಗಿಕ ದೌರ್ಜನ್ಯದಿಂದ ಮಕ್ಕಳ ರಕ್ಷಣೆ ಕಾಯ್ದೆ, 2012

**ಉದ್ದೇಶ:**

ಸಮಗ್ರ ಮಕ್ಕಳ ರಕ್ಷಣಾ ಸೊಸೈಟಿಯು ನಿರ್ಲಕ್ಷತೆಗೊಳಗಾದ, ಪರಿತ್ಯಜಿಸಲ್ಪಟ್ಟ, ದೌರ್ಜನ್ಯಕ್ಕೆ ಒಳಗಾದ, ಶೋಷಣೆಗೆ ಒಳಗಾದ ಮತ್ತು ಕುಟುಂಬದಿಂದ ಬೇರ್ಪಟ್ಟ ಮಕ್ಕಳು ದುರ್ಬಲ ಸ್ಥಿತಿಗೆ ತಲುಪದಿರುವಂತೆ ತಡೆಯಲು ಹಾಗೂ ಇಂತಹ ಪ್ರಕರಣಗಳನ್ನು ಕಡಿಮೆ ಮಾಡಲು ಮತ್ತು ಸಂಕಷ್ಟದಲ್ಲಿರುವ ಮಕ್ಕಳ ಪರಿಸ್ಥಿತಿಯನ್ನು ಉತ್ತಮಪಡಿಸುವ ಉದ್ದೇಶವನ್ನು ಹೊಂದಿರುತ್ತದೆ.

**ಆದ್ಯತಾ ಗುಂಪು:**

**ಸಮಗ್ರ ಮಕ್ಕಳ ರಕ್ಷಣಾ ಯೋಜನೆಯು ಬಾಲನ್ಯಾಯ ಕಾಯ್ದೆಯ ಅಡಿಯಲ್ಲಿ ಪಾಲನೆ ಮತ್ತು ರಕ್ಷಣೆಯ ಅಗತ್ಯವಿರುವ ಮಕ್ಕಳು ಮತ್ತು ಕಾನೂನಿನೊಂದಿಗೆ ಸಂಘರ್ಷಕ್ಕೊಳಪಟ್ಟ ಮಕ್ಕಳಿಗೆ ಮತ್ತು ಕಾನೂನಿನ ಸಂಪರ್ಕಕ್ಕೆ ಬರುವ ಮಕ್ಕಳು ಅಂದರೆ ಆಪಾದಿತ ಅಥವಾ ಸಾಕ್ಷಿದಾರ ಅಥವಾ ಇತರೆ ಯಾವುದೇ ರೀತಿಯ ಪರಿಸ್ಥಿತಿಯುಳ್ಳ ಮಕ್ಕಳಿಗೆ ತನ್ನ ಉದ್ದೇಶಿತ ಕಾರ್ಯ ಚಟುವಟಿಕೆಗಳಲ್ಲಿ ಗಮನ ನೀಡುತ್ತದೆ.**

**ಸಮಗ್ರ ಮಕ್ಕಳ ರಕ್ಷಣಾ ಯೋಜನೆಯು ದುರ್ಬಲ ಮಕ್ಕಳಿಗೆ ಶಾಸನಬದ್ಧ, ನಿಯಂತ್ರಣಾತ್ಮಕ ಮತ್ತು ಪೋಷಣೆ ಮತ್ತು ಪುನರ್ವಸತಿ ಸೇವೆಗಳನ್ನು ನೀಡುವುದಲ್ಲದೆ ಸಂಭಾವ್ಯ ದುರ್ಬಲ ಕುಟುಂಬದ ಮತ್ತು ಅಪಾಯದಲ್ಲಿರುವ ಕುಟುಂಬ ಮತ್ತು ಸಾಮಾಜಿಕವಾಗಿ ಹೊರತುಪಡಿಸಿದ ಗುಂಪಿನ ಮಕ್ಕಳು ಅಂದರೆ ವಲಸೆ ಕುಟುಂಬಗಳು, ಬಡತನ ರೇಖೆಗಿಂತ ಕಡಿಮೆ ಜೀವನ ಮಟ್ಟದ ಕುಟುಂಬ, ಪರಿಶಿಷ್ಟ ಜಾತಿ ಮತ್ತು ಪಂಗಡ, ಇತರೆ ಹಿಂದುಳಿದ ವರ್ಗಗಳು, ತಾರತಮ್ಯಕ್ಕೆ ಒಳಗಾದ ಕುಟುಂಬಗಳು, ಹೆಚ್‌ಐವಿ/ಏಡ್ಸ್ ಪೀಡಿತ ಮತ್ತು ಬಾಧಿತ ಮಕ್ಕಳು, ಬೀದಿ ಮಕ್ಕಳು, ಮಾದಕ ದ್ರವ್ಯ ಪೀಡಿತ ಮಕ್ಕಳು, ದೌರ್ಜನ್ಯಕ್ಕೆ ಒಳಗಾದ ಮಕ್ಕಳು, ಬಾಲಕಾರ್ಮಿಕ ಮಕ್ಕಳು, ಅನೈತಿಕ ಸಾಗಾಣಿಕೆ ಅಥವಾ ಲೈಂಗಿಕ ದೌರ್ಜನ್ಯಕ್ಕೊಳಗಾದ ಮಕ್ಕಳು, ಅನಾಥ ಮಕ್ಕಳಿಗೆ ತನ್ನ ಉದ್ದೇಶಿತ ಕಾರ್ಯ ಚಟುವಟಿಕೆಗಳಲ್ಲಿ ಗಮನ ನೀಡುತ್ತದೆ.**